# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 985(1347)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕಾಂತರಾಜ್(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ಪ್ರವಾಸೋದ್ಯಮ ಮೂಲಸೌಕರ್ಯ ನಿಗಮದ ಕಾರ್ಯವೈಖರಿ ಬಗ್ಗೆ

(ಅ) ರಾಜ್ಯ ಪ್ರವಾಸೋದ್ಯಮ ಮೂಲ ಸೌಕರ್ಯ ಅಭಿವೃದ್ಧಿ ನಿಗಮವನ್ನು ಯಾವಾಗ ಸ್ಥಾಪನೆ ಮಾಡಲಾಯಿತು; ಇದರ ಧ್ಯೇಯೋದ್ದೇಶ ಮತ್ತು ಕರ್ತವ್ಯಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಈ ನಿಗಮದಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ/ಗುತ್ತಿಗೆ/ಹೊರಗುತ್ತಿಗೆ ಸಂಪನ್ಮೂಲ ಸಂಸ್ಥೆಗಳಿಂದ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಯಾರು ಯಾರು; (ವಿವರವಾಗಿ ಸಿಬ್ಬಂದಿಯ ಹೆಸರು ಹುದ್ದೆಯ ಪದನಾಮ, ಮಾಸಿಕ ಪಡೆಯುತ್ತಿರುವ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ನಿಗಮವು ಪ್ರಾರಂಭದಿಂದ ಇಲ್ಲಿಯವರಿಗೆ ಯಾವ ಯಾವ ಕಾಮಗಾರಿಗಳನ್ನು ಕೈಗೊಂಡಿದೆ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ನಿಗಮದಲ್ಲಿ ಎಷ್ಟು ಹಣ ಇದೆ; ಇದನ್ನು ಯಾವ ಉದ್ದೇಶಕ್ಕೆ ಉಪಯೋಗಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)